# ಕರ್ನಾಟಕ ವಿಧಾನ ಪರಿಷತ್ತು

1. ಸದಸ್ಯರ ಹೆಸರು : ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು)
2. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2211
3. ಉತ್ತರಿಸ ಬೇಕಾದ ದಿನಾಂಕ : 18-03-2022

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕಾರ್ಯಗತ ಮಾಡಲಾಗುವ ನರೇಗಾ ಯೋಜನೆಯಡಿಯಲ್ಲಿನ ಕಾಮಗಾರಿಗಳ ಪ್ರಗತಿ ಮತ್ತು ಗುಣಮಟ್ಟದ ಪರಿಶೀಲನೆ ನಡೆಸಲು ಪ್ರತಿ ಗ್ರಾಮದಲ್ಲೂ ಮೇಲುಸ್ತುವಾರಿ ಸಮಿತಿ ಅಸ್ತಿತ್ವದಲ್ಲಿ ಇರಬೇಕೆಂದು ನರೇಗಾ ಯೋಜನೆ ಅನುಷ್ಠಾನದ ಬಗ್ಗೆ ರೂಪಿಸಲಾಗಿರುವ ನಿಯಮಾವಳಿಗಳಲ್ಲಿ ಅಳವಡಿಸಲಾಗಿದೆಯೇ; | ಮಹಾತ್ಮ ಗಾಂಧಿ ನರೇಗಾ ಅಧಿನಿಯಮ-2005ರ ಪ್ರಕರಣ4 ರ ಉಪಪ್ರಕರಣ 1ರ ಪ್ರಕಾರ, ಕರ್ನಾಟಕ ರಾಜ್ಯ ಸರ್ಕಾರವು ಯೋಜನೆಯನ್ನು ರೂಪಿಸಿ ಅಧಿಸೂಚನೆಯ ಮೂಲಕ ದಿನಾಂಕ:01-02-2007 ರಂದು ಜಾರಿಗೊಳಿಸಲಾಗಿದೆ. ನರೇಗಾ ಯೋಜನೆಯಡಿ ಕಾಮಗಾರಿಗಳ ಪ್ರಗತಿ ಮತ್ತು ಗುಣಮಟ್ಟ ಪರಿಶೀಲನೆಯನ್ನು ಪ್ರತಿ ಗ್ರಾಮದಲ್ಲಿ ನಡೆಸಲು ಮೇಲುಸ್ತುವಾರಿ ಸಮಿತಿಯನ್ನು ಪ್ರತ್ಯೇಕವಾಗಿ ರಚಿಸಿರುವುದಿಲ್ಲ. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದ ಪ್ರಕರಣ 61(ಎ) ಅಡಿಯಲ್ಲಿ ಪ್ರತಿ ಗ್ರಾಮಕ್ಕೆ ರಚಿಸಲಾಗಿರುವ ಗ್ರಾಮದ ನೀರು ಮತ್ತು ನೈರ್ಮಲ್ಯ ಸಮಿತಿ ನರೇಗಾ ಯೋಜನೆಯಡಿಯಲ್ಲಿ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯಾಗಿಯೂ ಸಹ ಕಾರ್ಯ ನಿರ್ವಹಿಸಲಾಗುತ್ತಿರುತ್ತದೆ. ಪ್ರತಿ ಲಗತ್ತಿಸಿದೆ. |
| ಆ) | ಹಾಗಿದ್ದಲ್ಲಿ, ಹಾಲಿ ರಾಜ್ಯದ ಎಷ್ಟು ಗ್ರಾಮಗಳಲ್ಲಿ ಈ ರೀತಿಯ ನರೇಗಾ ಯೋಜನೆ ಮೇಲುಸ್ತುವಾರಿ ಸಮಿತಿಗಳು ಕಾರ್ಯನಿರ್ವಹಣೆ ಮಾಡುತ್ತಿವೆ; | ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. |
| ಇ) | ನರೇಗಾ ಯೋಜನೆಯಡಿಯಲ್ಲಿ ಕೈಗೊಳ್ಳುವ ಕಾಮಗಾರಿಗಳ ಪ್ರಗತಿ ಹಾಗೂ ಗುಣಮಟ್ಟದ ಬಗ್ಗೆ ಸ್ಥಳೀಯ ಮಟ್ಟದಲ್ಲಿ ಸಾರ್ವಜನಿಕ ಸಹಭಾಗಿತ್ವ ಸಾಧನೆಗೆ ಅನುಕೂಲವಾಗುವಂತೆ ನರೇಗಾ ಯೋಜನೆ ಜಾಗೃತ ಮತ್ತು ಮೇಲುಸ್ತುವಾರಿ ಸಮಿತಿಗಳು ಪ್ರತಿ ಗ್ರಾಮದಲ್ಲಿಯೂ ಅಸ್ತಿತ್ವಕ್ಕೆ ಬಂದು ಕಾರ್ಯನಿರ್ವಹಣೆ ಮಾಡುವ ನಿಟ್ಟಿನಲ್ಲಿ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು? | ಕಾಮಗಾರಿಗಳ ಪ್ರಗತಿ ಮತ್ತು ಗುಣಮಟ್ಟದ ಪರಿಶೀಲನೆಗಾಗಿ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಜೊತೆಗೆ ರಾಜ್ಯದಲ್ಲಿ ಕಾಮಗಾರಿಗಳ ಗುಣಮಟ್ಟದ ಪರಿಶೀಲನೆ ಮತ್ತು ಪರಿವೀಕ್ಷಣೆ ಮಾಡಲು ರಾಜ್ಯ/ಜಿಲ್ಲಾ ಗುಣನಿಯಂತ್ರಣ ಮಾನಿಟರ್‌ಗಳನ್ನು ಎಂಪ್ಯಾನಲ್ ಮಾಡಲಾಗಿದೆ. ಇದಲ್ಲದೇ ಇತ್ತೀಚೆಗೆ ಯೋಜನೆಯಲ್ಲಿ ಪಾರದರ್ಶಕತೆಯನ್ನು ತರಲು ಮೂರನೇ ಪಕ್ಷದ ಪರಿವೀಕ್ಷಕರನ್ನು (Third Party Evaluators) ಜಿಲ್ಲಾವಾರು ಎಂಪ್ಯಾನಲ್ ಮಾಡಲಾಗಿದೆ. |

RDC/EGS/132(20)/2022, e-office No:712644

(ಕೆ. ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

Scanned with CamScanner

ಅನುಬಂಧ



16. ಕಾಮಗಾರಿಗಳ ಅನುಷ್ಠಾನ

(1) ಕಾಮಗಾರಿಗಳ ಒಟ್ಟು ಮೊತ್ತದ ಕನಿಷ್ಠ ಶೇಕಡ 50ರಷ್ಟು ಕಾಮಗಾರಿಗಳನ್ನು, ಅನುಷ್ಠಾನಕ್ಕಾಗಿ ಗ್ರಾಮಪಂಚಾಯತಿಗಳಿಗೆ ವಹಿಸತಕ್ಕದ್ದು. ಉದ್ಯೋಗ ಬೇಡಿಕೆಗೆ ಅನುಸಾರವಾಗಿ ಕಾಮಗಾರಿಗಳನ್ನು ಪ್ರಾರಂಭಿಸಲು, ಕಾಮಗಾರಿ ಪ್ರಾರಂಭ ಪತ್ರ ನೀಡುವಂತೆ, ಗ್ರಾಮಪಂಚಾಯತಿ ಕಾರ್ಯದರ್ಶಿ, ಕಾರ್ಯಕ್ರಮ ಅಧಿಕಾರಿಗೆ ಕೋರಿಕೆ ಸಲ್ಲಿಸಬೇಕು. ಜಿಲ್ಲಾಕಾರ್ಯಕ್ರಮ ಸಮನ್ವಯಅಧಿಕಾರಿ, ಆಡಳಿತಾತ್ಮಕ ಅನುಮೋದನೆ ನೀಡಿರುವ ಪಟ್ಟಿಯಲ್ಲಿರುವ ಅನುಕ್ರಮದಂತೆ, ಕಾಮಗಾರಿಗಳನ್ನು ಪ್ರಾರಂಭಿಸಲು, ಕಾರ್ಯಕ್ರಮ ಅಧಿಕಾರಿ ಗ್ರಾಮಪಂಚಾಯತಿಗಳಿಗೆ ಕಾಮಗಾರಿ ಪ್ರಾರಂಭ ಪತ್ರ ನೀಡಬೇಕು. ಒಂದು ಆರ್ಥಿಕ ವರ್ಷದಲ್ಲಿ ಕಾಮಗಾರಿಗಳನ್ನು ಪ್ರಾರಂಭಿಸಲು ನೀಡಿದ ಈ ಪತ್ರಗಳ ವಿವರಗಳನ್ನು ಗ್ರಾಮಪಂಚಾಯತಿಯು ಒಂದು ವಹಿಯಲ್ಲಿ ನಿರ್ವಹಿಸತಕ್ಕದ್ದು.

(2) ಕಾಮಗಾರಿ ಪ್ರಾರಂಭ ಪತ್ರ ಪಡೆದಕೂಡಲೆ, ಕಾರ್ಯನಿರ್ವಹಣಾ ಏಜೆನ್ಸಿಗಳು ಕಾಮಗಾರಿಗಳನ್ನು ಪ್ರಾರಂಭಿಸಬೇಕು.

(3) ಉದ್ಯೋಗ ಖಾತರಿ ಯೋಜನೆಯಲ್ಲಿ ಸೂಚಿಸಿರುವ ಕ್ರಮಗಳನ್ನು ಕಾಮಗಾರಿಗಳ ಅನುಷ್ಠಾನದಲ್ಲಿ ಅನುಸರಿಸಬೇಕು.

(4) ಪ್ರತ್ಯೇಕ ಕ್ರಮ ಸಂಖ್ಯೆಯನ್ನು ಹೊಂದಿರುವ ಹಾಜರಿಪಟ್ಟಿಗಳನ್ನು ಜಿಲ್ಲಾಕಾರ್ಯಕ್ರಮ ಸಮನ್ವಯ ಅಧಿಕಾರಿ, ಕಾರ್ಯಕ್ರಮ ಅಧಿಕಾರಿಗೆ ಸರಬರಾಜು ಮಾಡಬೇಕು. ಕಾರ್ಯಕ್ರಮ ಅಧಿಕಾರಿ ಪ್ರತಿ ಕಾರ್ಯನಿರ್ವಹಣಾ ಏಜೆನ್ಸಿಗೆ, ಕಾಮಗಾರಿಗಳ ಅಗತ್ಯಕ್ಕೆ ಅನುಸಾರವಾಗಿ ಈ ಹಾಜರಿ ಪಟ್ಟಿಗಳನ್ನು ವಿತರಿಸಬೇಕು. ಕಾರ್ಯನಿರ್ವಹಣಾ ಇಲಾಖೆಗಳು ಹಾಜರಿಪಟ್ಟಿಗಳ ದಾಸ್ತಾನು ವಹಿಗಳನ್ನು ನಿರ್ವಹಿಸಬೇಕು. ಹಾಜರಿಪಟ್ಟಿಗಳನ್ನು ಪ್ರತಿ ವಾರಕ್ಕೊಮ್ಮೆ ಅಂತಿಮಗೊಳಿಸಬೇಕು.

17. ಅಕುಶಲ ಕೆಲಸಗಾರರಿಗೆ ಕೂಲಿ ಪಾವತಿ

(1) ಪುರುಷರಿಗೆ ಮತ್ತು ಮಹಿಳೆಯರಿಗೆ ಸಮಾನ ಕೂಲಿ ಪಾವತಿಸಬೇಕು, ಕೂಲಿಯನ್ನು ಕನಿಷ್ಠ ಹದಿನೈದು ದಿನಗಳಿಗೊಮ್ಮೆಯಾದರೂ ಪಾವತಿಸಬೇಕು. ಜಿಲ್ಲಾವಾರು ಗಳಿಸುವ ಸರಾಸರಿ ಕೂಲಿಯ ವಿವರಗಳನ್ನು ರಾಜ್ಯ ಕಾರ್ಯಕ್ರಮ ಸಮನ್ವಯ ಅಧಿಕಾರಿ ಪ್ರತಿ ವರ್ಷ ರಾಜ್ಯಪರಿಷತ್ತಿನ ಗಮನಕ್ಕೆ ಸಲ್ಲಿಸಬೇಕು. ಕಾರ್ಯನಿರ್ವಹಣಾ ಏಜೆನ್ಸಿ ಯಾವುದೇ ಆದರು ಸಹ, ಅಕುಶಲ ಕಾರ್ಮಿಕರ ಕೂಲಿಯನ್ನು ಗ್ರಾಮಪಂಚಾಯತಿಯ ಮೂಲಕವೇ ಪಾವತಿಸತಕ್ಕದ್ದು.

(2) ಉದ್ಯೋಗ ನೀಡಿದ ದಿನಗಳ ಸಂಖ್ಯೆ ಮತ್ತು ಪಾವತಿಸಿದ ಕೂಲಿಯ ವಿವರಗಳನ್ನು ಕುಟುಂಬ ಉದ್ಯೋಗ ಚೀಟಿಯಲ್ಲಿ ಮತ್ತು ಗ್ರಾಮಪಂಚಾಯತಿ ನಿರ್ವಹಿಸುವ ಉದ್ಯೋಗಾಕಾಂಕ್ಷಿಗಳ ಮತ್ತು ಉದ್ಯೋಗ ವಹಿಯಲ್ಲಿ ಆಗಿಂದಾಗ್ಗೆ ದಾಖಲಿಸುತ್ತಿರಬೇಕು. ಯಾವ ಗ್ರಾಮಗಳಲ್ಲಿ ಬ್ಯಾಂಕ್ ಶಾಖೆ ಅಥವಾ ಅಂಚೆಕಛೇರಿ ಇದೆಯೋ, ಕೂಲಿ ಪಾವತಿಗಾಗಿ ಅವುಗಳಲ್ಲಿ ಖಾತೆಗಳನ್ನು ತೆರೆಯಲು ಕಾರ್ಮಿಕರಿಗೆ ಸಹಾಯ ಮಾಡಬೇಕು.

18. ಕಾಮಗಾರಿಗಳ ಮುಕ್ತಾಯ ಮತ್ತು ಮಾಹಿತಿಯ ನಿರ್ವಹಣೆ

ಮುಕ್ತಾಯದ ವರದಿಯೊಂದಿಗೆ ಕಾರ್ಯನಿರ್ವಹಣಾ ಏಜೆನ್ಸಿ ಕಾಮಗಾರಿಯನ್ನು ಅಂತಿಮಗೊಳಿಸಬೇಕು. ಪ್ರತಿ ಗ್ರಾಮಪಂಚಾಯತಿ ಮತ್ತು ಪ್ರತಿ ಕಾರ್ಯನಿರ್ವಹಣಾ ಏಜೆನ್ಸಿ, ಮಂಜೂರಿಯಾದ, ಅನುಷ್ಠಾನಗೊಳಿಸಿದ ಮತ್ತು ಮುಕ್ತಾಯಗೊಂಡ ಕಾಮಗಾರಿಗಳ ವಿವರಗಳನ್ನು ವಹಿಯಲ್ಲಿ ದಾಖಲಿಸಿ ನಿರ್ವಹಿಸಬೇಕು.

19. ಲೆಕ್ಕಪರಿಶೋಧನೆ

ಈ ಯೋಜನೆಯಡಿಯ ಲೆಕ್ಕಗಳ ಲೆಕ್ಕಪರಿಶೋಧನೆ ಮಾಡುವುದು ಕಡ್ಡಾಯ. ಜಾರಿಯಲ್ಲಿರುವ ನಿಯಮಗಳ ಪ್ರಕಾರ ಗ್ರಾಮಪಂಚಾಯತಿ, ತಾಲ್ಲೂಕುಪಂಚಾಯತಿ ಮತ್ತು ಜಿಲ್ಲಾಪಂಚಾಯತಿಯ ಲೆಕ್ಕಗಳನ್ನು ಶಾಸನಬದ್ಧ ಲೆಕ್ಕಪರಿಶೋಧಕರು, ಲೆಕ್ಕಪರಿಶೋಧನೆ ಮಾಡತಕ್ಕದ್ದು. ರಾಜ್ಯ ಸರ್ಕಾರ ಪಟ್ಟಿಮಾಡಿರುವ ನೋಂದಾಯಿತ ಚಾರ್ಟರ್ಡ್ ಅಕೌಂಟೆಂಟ್ಸ್ ಮೂಲಕ ಹಣಕಾಸಿನ ಲೆಕ್ಕಪರಿಶೋಧನೆಯನ್ನು ಮಾಡಲು ಜಿಲ್ಲಾ ಕಾರ್ಯಕ್ರಮ ಸಮನ್ವಯ ಅಧಿಕಾರಿ, ವ್ಯವಸ್ಥೆ ಮಾಡತಕ್ಕದ್ದು.

20. ಜಾಗೃತಿ ಮತ್ತು ಗುಣನಿಯಂತ್ರಣ

(1) ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನದ ಮೇಲ್ವಿಚಾರಣೆ ಮಾಡಲು, ಸ್ವತಂತ್ರವಾದ ಜಾಗೃತಿ ಮತ್ತು ಗುಣನಿಯಂತ್ರಣ ತಂಡಗಳನ್ನು ನೇಮಿಸತಕ್ಕದ್ದು.

(2) ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದ ಪ್ರಕರಣ 61(ಎ) ಅಡಿಯಲ್ಲಿ ಪ್ರತಿ ಗ್ರಾಮಕ್ಕೆ ರಚಿಸಲಾಗಿರುವ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ ಈ ಯೋಜನೆಯಡಿಯಲ್ಲಿ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯಾಗಿಯೂ ಸಹ ಕಾರ್ಯನಿರ್ವಹಿಸತಕ್ಕದ್ದು.

21. ಸಾಮಾಜಿಕ ಲೆಕ್ಕಪರಿಶೋಧನೆ ಮತ್ತು ಮಾಹಿತಿ ಹಕ್ಕು

(1) ಉದ್ಯೋಗ ಖಾತರಿ ಯೋಜನೆಯಡಿ ಮಾಡಲಾಗುವ ಯೋಜನೆ, ಅನುಷ್ಠಾನ ಮತ್ತು ಮೌಲ್ಯಮಾಪನಗಳಲ್ಲಿ, ಜನರ ಭಾಗವಹಿಸುವಿಕೆ, ಪಾರದರ್ಶಕತೆ ಮತ್ತು ಜವಾಬ್ದಾರಿಯಿಂದ ಕೂಡಿರುವಂತೆ ಮಾಡಲು ಸಾಮಾಜಿಕ ಲೆಕ್ಕಪರಿಶೋಧನೆಯ ವ್ಯವಸ್ಥೆ ಮಾಡತಕ್ಕದ್ದು. ಈ ಯೋಜನೆಯಲ್ಲಿ ಕೆಲಸಮಾಡುವ ಕಾರ್ಮಿಕರಿಗೆ ನ್ಯಾಯಯುತವಾಗಿ ದೊರೆಯಬೇಕಾಗಿರುವ ಹಕ್ಕುಗಳು ಅವರಿಗೆ ದೊರೆಯುತ್ತಿರುವುದನ್ನು ಖಚಿತಪಡಿಸಿಕೊಳ್ಳಲು, ಸಾಮಾಜಿಕ ತಪಾಸಣೆಯನ್ನು, ಪೂರ್ವಾನ್ವಯವಾಗುವಂತೆ ಮಾಡದೆ, ಚಾಲ್ತಿಯಲ್ಲಿರುವ ಪ್ರಕ್ರಿಯೆಗಳಲ್ಲಿ ಮಾಡತಕ್ಕದ್ದು. ಇದನ್ನು; ಅನುಷ್ಠಾನಕ್ಕೆ ಮೊದಲು, ಅನುಷ್ಠಾನದ ಸಮಯದಲ್ಲಿ ಮತ್ತು ಅನುಷ್ಠಾನದ ನಂತರ, ಹೀಗೆ ಮೂರು ಹಂತಗಳಲ್ಲಿ ಮಾಡಬೇಕು ಹಾಗೂ ಇದು ಉದ್ಯೋಗ ಖಾತರಿ ಯೋಜನೆಯ ಮುಖ್ಯ ಚಟುವಟಿಕೆಗಳ ಅವಿಭಾಜ್ಯ ಅಂಗವಾಗಿರತಕ್ಕದ್ದು.

Scanned with CamScanner